ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: [illegible] ದಿನಾಂಕ : DATE 3/3/21

ನಾಳೆಯಿಂದ ಬಜೆಟ್ ಅಧಿವೇಶನ

ಸಂ.ಕ.ಸಮಾಚಾರ, ಬೆಂಗಳೂರು

ವಿಧಾನಮಂಡಲದ ಬಜೆಟ್ ಅಧಿವೇಶನ ಮಾ.4ರಿಂದ ಆರಂಭವಾಗಲಿದೆ.

ನಾಳೆಯಿಂದ ಮಾ.31ರವರೆಗೆ 19 ದಿನಗಳ ಕಾಲ ಉಭಯ ಸದನಗಳ ಅಧಿವೇಶನ ನಡೆಯಲಿದ್ದು ಮಾ.8ರಂದು 2021-22ನೇ ಸಾಲಿನ ರಾಜ್ಯ ಬಜೆಟ್ ಮಂಡನೆಯಾಗಲಿದೆ. ಎರಡೂ ಸದನದಲ್ಲಿ ಮಾ.4 ಮತ್ತು 5ರಂದು ಒಂದು ದೇಶ ಒಂದು ಚುನಾವಣೆ ಕುರಿತು ಚರ್ಚೆ ನಡೆಯಲಿದ್ದು ಸಮಾಲೋಚನೆಯಲ್ಲಿ ವ್ಯಕ್ತವಾದ ಅಭಿಪ್ರಾಯಗಳನ್ನು ಕೇಂದ್ರ ಚುನಾವಣಾ ಆಯೋಗ, ಕೇಂದ್ರ ಸರ್ಕಾರಕ್ಕೆ ಕಳುಹಿಸಿಕೊಡಲಾಗುತ್ತದೆ.

ಮಂಗಳವಾರ ಪತ್ರಿಕಾ ಗೋಷ್ಠಿಯಲ್ಲಿ ಮಾಹಿತಿ ನೀಡಿದ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಹಾಗೂ ಬಸವರಾಜ ಹೊರಟ್ಟಿ ಅವರು, ಬಜೆಟ್ ಮಂಡನೆ, ಬಜೆಟ್ ಮೇಲಿನ ಚರ್ಚೆ ಮಾತ್ರವಲ್ಲದೇ ಪ್ರಶ್ನೋತ್ತರ, ಶೂನ್ಯ ವೇಳೆ, ಗಮನ ಸೆಳೆಯುವ ಸೂಚನೆ ಮತ್ತಿತರ ಅಧಿಕೃತ ಕಲಾಪಗಳು ನಡೆಯಲಿವೆ. ಕೊರೊನಾ ಎರಡನೇ ಅಲೆಯ ಭೀತಿಯಿರುವ ಹಿನ್ನೆಲೆಯಲ್ಲಿ ಕೊರೊನಾ ನಿಯಂತ್ರಣ ಮಾರ್ಗಸೂಚಿಯನ್ನೂ ಎಲ್ಲಾ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದರು.

ಒಂದು ದೇಶ ಒಂದು ಚುನಾವಣೆ ಕುರಿತ ಚರ್ಚೆಯು ಲೋಕಸಭೆ ಮತ್ತು ವಿಧಾನಸಭೆಯ ಚುನಾವಣೆಗಷ್ಟೇ ಸೀಮಿತವಾಗಿದ್ದು ರಾಜ್ಯ ಚುನಾವಣಾ ಆಯೋಗದ ವ್ಯಾಪ್ತಿಗೆ ಬರುವ ಚುನಾವಣೆಗಳಿಗೆ ಈ ಚರ್ಚೆ ಅನ್ವಯವಾಗದು. ಎರಡು ದಿನಗಳ ಚರ್ಚೆಯಲ್ಲಿ [illegible] ಪ್ರಮಾಣದಲ್ಲಿ ಪಾಲ್ಗೊಳ್ಳುವಂತೆ ಎಲ್ಲಾ ಪಕ್ಷಗಳ ಮುಖಂಡರಲ್ಲಿ ಮನವಿ ಮಾಡಿಕೊಳ್ಳಲಾಗಿದೆ ಎಂದು ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದರು.

ಬಜೆಟ್ ಅಧಿವೇಶನದಲ್ಲಿ ಧನ ವಿನಿಯೋಗ ವಿಧೇಯಕ ಮಾತ್ರವಲ್ಲದೆ, ಕರ್ನಾಟಕ [illegible] ತಿದ್ದುಪಡಿ ವಿಧೇಯಕ-2021 ಸೇರಿದಂತೆ ಒಟ್ಟು ಮೂರು ವಿಧೇಯಕಗಳು ಮಂಡನೆಯಾಗಲಿವೆ ಎಂದರು.

[illegible] ಬಹಿಷ್ಕಾರ

ವಿಧಾನಸಭಾ ಅಧಿವೇಶನದಲ್ಲಿ ಅವಕಾಶ ಕಲ್ಪಿಸದಿರುವುದನ್ನು ವಿರೋಧಿಸಿ [illegible] ಛಾಯಾಗ್ರಾಹಕರು [illegible] ಪ್ರಸಂಗ ಮಂಗಳವಾರ ನಡೆಯಿತು. [illegible] ಲೋಕಸಭೆ-ರಾಜ್ಯಸಭೆ ಹಾಗೂ ದೇಶದ 21 ರಾಜ್ಯಗಳಲ್ಲಿ ಇರುವ ಪದ್ಧತಿಯನ್ನೇ ರಾಜ್ಯದಲ್ಲಿ ಜಾರಿಗೆ ತರಲಾಗಿದೆ. ಇದೇನೂ ಹೊಸದಲ್ಲ. [illegible] ವಿಷಯಾಂತರ ಮಾಡಿದರು.